# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 08
ಸದಸ್ಯರ ಹೆಸರು : ಶ್ರೀ ಪ್ರಕಾಶ್.ಕೆ ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 02-03-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಸರ್ಕಾರಿ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳೆಷ್ಟು;</td><td>ರಾಜ್ಯದ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ ಬೋದಕೇತರ ಹುದ್ದೆಗಳ ವಿವರ ಕೆಳಗಿನಂತಿದೆ:-
<table>
<tr><th></th><th>ಬೋಧಕ</th><th>ಬೋಧಕೇತರ</th></tr>
<tr><td>ಪ್ರಾಥಮಿಕ</td><td>1,340</td><td>0</td></tr>
<tr><td>ಪ್ರೌಢ</td><td>4,444</td><td>1,198</td></tr>
</table></td></tr>
<tr><td>ಆ</td><td>ಬೋಧಕರಿಲ್ಲದ ಕಾರಣ ಶಿಕ್ಷಣದ ಗುಣಮಟ್ಟ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ</td></tr>
<tr><td>ಇ</td><td>ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು?</td><td>ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರಿದ್ದು, ಅವರುಗಳನ್ನು ಗುರುತಿಸಿ ಮರು ಹಂಚಿಕೆ ಮಾಡಲು ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ ಅದರಂತೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಅಗತ್ಯಕ್ಕಿಂತ ಹೆಚ್ಚುವರಿ ಶಿಕ್ಷಕರಿರುವ ಅನುದಾನಿತ ಪ್ರಾಥಮಿಕ ಶಾಲೆಗಳಿಂದ ಮರು ಹೊಂದಾಣಿಕೆಗಳನ್ನು ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳ ಹಂತದಲ್ಲಿಯೇ ಮಾಡಲಾಗುತ್ತಿದೆ<br><br>ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ದಿನಾಂಕ 31.12.2015ರ ವರೆಗೆ ವಿವಿಧ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017, ದಿನಾಂಕ 25.09.2018ರಲ್ಲಿ ಅನುಮತಿಸಲಾಗಿದೆ<br><br>ದಿನಾಂಕ.01.01.2016ರ ನಂತರದಲ್ಲಿ ಖಾಲಿಯಾದ ಪ್ರೌಢ ಶಾಲಾ ಬೋಧಕ ಹುದ್ದೆಗಳ ವಿವರ ಹಾಗೂ ಅಂದಾಜು ವೆಚ್ಚದ ವಿವರಗಳನ್ನು ಕ್ರೋಢೀಕರಿಸಲಾಗಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ</td></tr>
</table>

ಇಪಿ 35 ಪಿಎಂಸಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು